Akashvani: Bangalore
National Bulletin In Kannada
05.02.2026 : 13.10hrs
**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

05.02.2026 : 13.10hrs
********

**ಮುಖ್ಯಾಂಶಗಳು :**

1. ರಾಷ್ಟ್ರಪತಿಯವರ ಭಾಷಣದ ಮೇಲಿನ ವಂದನಾ ನಿರ್ಣಯದ ಚರ್ಚೆಗೆ ರಾಜ್ಯಸಭೆಯಲ್ಲಿಂದು ಪ್ರಧಾನಿ ಉತ್ತರ - ಸಚಿವ ಕಿರಣ್ ರಿಜಿಜು
2. ಪ್ರಧಾನಿ ನರೇಂದ್ರ ಮೋದಿ ಪರೀಕ್ಷೆ ಎದುರಿಸಲಿರುವ ಮಕ್ಕಳೊಂದಿಗೆ ನಡೆಸಿದ ವಿಶೇಷ ಆವೃತ್ತಿ 'ಪರೀಕ್ಷೆ ಪೇ ಚರ್ಚಾ' ನಾಳೆ ಪ್ರಸಾರ
3. ಐದು ದಿನಗಳ ಭಾರತ ಭೇಟಿಗೆ ಚೆನ್ನೈಗೆ ಆಗಮಿಸಿದ ಸೆಷಲ್ಸ್ ಅಧ್ಯಕ್ಷ ಪ್ಯಾಟ್ರಿಕ್ ಹರ್ಮನಿ
4. ಕೃತಕಬುದ್ಧಿಮತ್ತೆ ಸವಾಲುಗಳನ್ನು ಎದುರಿಸುವ ನಾಯಕತ್ವ ವಹಿಸಿಕೊಂಡಿರುವ ಭಾರತದ ಕ್ರಮಕ್ಕೆ ವಿಶ್ವಸಂಸ್ಥೆ ಪ್ರಧಾನ ಕಾರ್ಯದರ್ಶಿ ಶ್ಲಾಘನೆ
5. ಮಹಿಳೆಯರ ಪ್ರೀಮಿಯರ್ ಕ್ರಿಕೆಟ್ ಲೀಗ್ ; ಫೈನಲ್‌ನಲ್ಲಿಂದು ಡೆಲ್ಲಿ ಕ್ಯಾಪಿಟಲ್ಸ್-ರಾಯಲ್ ಚಾಲೆಂಜರ್ಸ್ ಬೆಂಗಳೂರು ಮುಖಾಮುಖಿ

*********

ರಾಷ್ಟ್ರಪತಿಯವರ ಭಾಷಣ ಮೇಲಿನ ವಂದನಾ ನಿರ್ಣಯ ಕುರಿತ ಚರ್ಚೆಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ಇಂದು ರಾಜ್ಯಸಭೆಯಲ್ಲಿ ಉತ್ತರ ನೀಡಲಿದ್ದಾರೆ ಎಂದು ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಹೇಳಿದ್ದಾರೆ. ರಾಜ್ಯಸಭೆಯಲ್ಲಿಂದು ಪ್ರತಿಪಕ್ಷ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರ ಆರೋಪಗಳನ್ನು ತಳ್ಳಿ ಹಾಕಿದ ರಿಜಿಜು ಎಲ್ಲ ಸಂಸದರು ಪ್ರಧಾನಮಂತ್ರಿಯವರ ಉತ್ತರವನ್ನು ಆಲಿಸಲು ಕಾಯುತ್ತಿದ್ದಾರೆ. ಆದರೆ ಕಾಂಗ್ರೆಸ್ ಪಕ್ಷಕ್ಕೆ ಪ್ರಧಾನಿಯವರ ಉತ್ತರ ಬೇಕಾಗಿಲ್ಲ. ಅದು ಅವರ ಆಯ್ಕೆ ಎಂದು ತಿಳಿಸಿದರು.

ಧ್ವನಿ : ಕಿರಣ್ ರಿಜಿಜು (೧೦ ಸೆಕೆಂಡ್‌ಗಳು)

ಲೋಕಸಭೆಯಲ್ಲಿ ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿಯವರಿಗೆ ರಾಷ್ಟ್ರಪತಿಯವರ ಭಾಷಣದ ಮೇಲಿನ ವಂದನಾ ನಿರ್ಣಯ ಕುರಿತು ಮಾತನಾಡಲು ಅವಕಾಶ ನೀಡುತ್ತಿಲ್ಲ ಎಂಬ ಮಲ್ಲಿಕಾರ್ಜುನ ಖರ್ಗೆ ಅವರ ಆರೋಪವನ್ನು ತಳ್ಳಿ ಹಾಕಿದ ಕಿರಣ್ ರಿಜಿಜು, ರಾಹುಲ್ ಗಾಂಧಿ ಸಂಸದೀಯ ನಿಯಮಗಳನ್ನು ಪಾಲನೆ ಮಾಡಿಲ್ಲ. ಅವರು ನಿಯಮಗಳನ್ನು ಮೀರಿದ್ದಾರೆ ಎಂದರು.

*********

ದೇಶಾದ್ಯಂತ ಪರೀಕ್ಷೆಗಳು ಹತ್ತಿರವಾಗುತ್ತಿದ್ದಂತೆ ಪ್ರಧಾನಮಂತ್ರಿಯವರ ಅತ್ಯಂತ ಮಹತ್ವಾಕಾಂಕ್ಷೆಯ ಪರೀಕ್ಷಾ ಪೇ ಚರ್ಚಾ ಕಾರ್ಯಕ್ರಮ ಮತ್ತೆ ಬಂದಿದೆ. ಈ ಬಾರಿ ಪ್ರಧಾನಿಯವರು ದೇವಮೊಗ್ರ, ಕೊಯಮತ್ತೂರು, ರಾಯಪುರ, ಗುವಾಹತಿ ಮತ್ತು ದೆಹಲಿಯ ೭ ಕಲ್ಯಾಣ ಮಾರ್ಗದಲ್ಲಿ ಪರೀಕ್ಷಾ ಯೋಧರೊಂದಿಗೆ ವಿಶೇಷ ಸಂವಾದ ನಡೆಸಿದ್ದಾರೆ. ವಿದ್ಯಾರ್ಥಿಗಳಲ್ಲಿ ಪರೀಕ್ಷೆ ಕುರಿತ ಭಯ ನಿವಾರಣೆ ಹಾಗೂ ಅವರನ್ನು ಪರೀಕ್ಷೆಗಳನ್ನು ಎದುರಿಸಲು ಮಾನಸಿಕವಾಗಿ ಸಜ್ಜುಗೊಳಿಸಿ ಉತ್ತೇಜನ ನೀಡುವ ಪರೀಕ್ಷಾ ಪೇ ಚರ್ಚಾದ ವಿಶೇಷ ಸಂಚಿಕೆ ನಾಳೆ ಪ್ರಸಾರವಾಗಲಿದೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಪ್ರಧಾನಿಯವರು ಮಂಗಳವಾರ ತಮ್ಮ ವಿವರವನ್ನು ಹಂಚಿಕೊಂಡಿದ್ದರು. ಅವರು ಪ್ರತಿಬಾರಿಯಂತೆ ನನ್ನ ಯುವ

ಸ್ನೇಹಿತರೊಂದಿಗೆ ಸಂವಹನ ನಡೆಸುವುದು ಮತ್ತು ಒತ್ತಡರಹಿತ ಪರೀಕ್ಷೆಗಳು ಹಾಗೂ ಇನ್ನಿತರ ವಿಷಯಗಳ ಬಗ್ಗೆ ಚರ್ಚಿಸುವುದು ಉಲ್ಲಾಸಕರವಾಗಿದೆ ಎಂದು ಹೇಳಿದ್ದಾರೆ.

*********

ಸೆಷಲ್ಸ್ ಅಧ್ಯಕ್ಷ ಪ್ಯಾಟ್ರಿಕ್ ಹರ್ಮನಿ ತಮ್ಮ ಭಾರತ ಭೇಟಿಯ ಭಾಗವಾಗಿ ಇಂದು ಬೆಳಗ್ಗೆ ಚೆನ್ನೈಗೆ ಆಗಮಿಸಿದರು. ಅವರನ್ನು ವಿಮಾನ ನಿಲ್ದಾಣದಲ್ಲಿ ರಾಜ್ಯಸಚಿವ ಮಥಿವೇಂದನ್ ಮತ್ತು ಹಿರಿಯ ಅಧಿಕಾರಿಗಳು ಆತ್ಮೀಯವಾಗಿ ಸ್ವಾಗತಿಸಿದರು. ಐದು ದಿನಗಳ ಭಾರತ ಪ್ರವಾಸ ಕೈಗೊಂಡಿರುವ ಸೆಷಲ್ಸ್ ಅಧ್ಯಕ್ಷ ಹರ್ಮನಿ ಅವರು, ಇಂದು ಚೆನ್ನೈನ ಎಸ್ಐಎನ್ಎಸ್ ಆಸ್ಪತ್ರೆ ಮತ್ತು ಬಾಲಾಜಿ ದಂತ ಆಸ್ಪತ್ರೆಗೆ ಭೇಟಿ ನೀಡಲಿದ್ದಾರೆ. ಅವರು, ನಾಳೆ ರಾಜ್ಯಪಾಲ ಆರ್.ಎನ್.ರವಿ ಅವರನ್ನು ಭೇಟಿ ಮಾಡಲಿದ್ದಾರೆ. ನಾಡಿದ್ದು ಮುಂಬೈಗೆ ತೆರಳಲಿರುವ ಅವರು, ಅಲ್ಲಿ ರಾಜ್ಯಪಾಲ ಆಚಾರ್ಯ ದೇವವ್ರತ್ ಅವರನ್ನು ಭೇಟಿ ಮಾಡುವರು. ಆ ನಂತರ ದೆಹಲಿಗೆ ಭೇಟಿ ನೀಡಲಿರುವ ಹರ್ಮನಿ, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿ ಮಾಡುವ ಕಾರ್ಯಕ್ರಮವಿದೆ. ಜೊತೆಗೆ ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ದ್ವಿಪಕ್ಷೀಯ, ಪ್ರಾದೇಶಿಕ ಹಾಗೂ ಪರಸ್ಪರ ಹಿತಾಸಕ್ತಿಯ ಅಂತಾರಾಷ್ಟ್ರೀಯ ವಿಷಯಗಳ ಕುರಿತು ಸಮಾಲೋಚನೆ ನಡೆಸಲಿದ್ದಾರೆ.

*********

ಪ್ರತಿಪಕ್ಷಗಳ ಪ್ರತಿಭಟನೆ, ಗದ್ದಲದ ಹಿನ್ನೆಲೆಯಲ್ಲಿ ಲೋಕಸಭೆ ಕಲಾಪವನ್ನು ಮಧ್ಯಾಹ್ನ ೨ ಗಂಟೆಯವರೆಗೆ ಮುಂದೂಡಲಾಗಿದೆ. ಮೊದಲಿಗೆ ಕಲಾಪವನ್ನು ೧೨ ಗಂಟೆಯವರೆಗೆ ಮುಂದೂಡಲಾಗಿತ್ತು. ಬಳಿಕ ಸದನ ಸಮಾವೇಶಗೊಂಡಾಗಲೂ ಪ್ರತಿಪಕ್ಷಗಳ ಪ್ರತಿಭಟನೆ ಹಾಗೂ ಘೋಷಣೆ ಕೂಗುವುದು ಮುಂದುವರೆದ ಹಿನ್ನೆಲೆಯಲ್ಲಿ ಕಲಾಪವನ್ನು ಮಧ್ಯಾಹ್ನದವರೆಗೆ ಮುಂದೂಡಲಾಗಿದೆ. ಸದನದ ಕಲಾಪ ಬೆಳಗ್ಗೆ ಆರಂಭವಾಗುತ್ತಿದ್ದಂತೆ ಲೋಕಸಭೆ ಸ್ಪೀಕರ್ ಓಂಬಿರ್ಲಾ, ಸ್ಪೀಕರ್ ಮುಂಭಾಗದ ಪೀಠದ ಬಳಿ ಆಗಮಿಸಿ ನಿನ್ನೆ ಪ್ರತಿಪಕ್ಷದ ಕೆಲವು ಸದಸ್ಯರು ಘೋಷಣೆಗಳನ್ನು ಕೂಗಿದ ನಡವಳಿಕೆಗೆ ಬೇಸರ ವ್ಯಕ್ತಪಡಿಸಿದರು. ಅಲ್ಲದೇ ಪ್ರತಿಪಕ್ಷಗಳ ಸದಸ್ಯರ ಇಂತಹ ವರ್ತನೆ ಸೂಕ್ತವಲ್ಲ. ಅದು ಸದನದ ಘನತೆ ಮತ್ತು ಗೌರವಕ್ಕೆ ಧಕ್ಕೆ ಮಾಡುತ್ತದೆ. ಸದನದಲ್ಲಿ ಘನತೆಯನ್ನು ಕಾಯ್ದುಕೊಳ್ಳುವುದು ಪ್ರತಿಯೊಬ್ಬ ಸದಸ್ಯರ ಸಾಮೂಹಿಕ ಕರ್ತವ್ಯವಾಗಿದೆ ಎಂದ ಅವರು, ಸದನದಲ್ಲಿ ಘನತೆಯನ್ನು ಕಾಯ್ದುಕೊಳ್ಳದಿದ್ದರೆ ಯಾವುದೇ ಸ್ಪೀಕರ್‌ಗೆ ಕಲಾಪವನ್ನು ಸುಗಮ ರೀತಿಯಲ್ಲಿ ನಡೆಸಲು ಸಾಧ್ಯವಾಗುವುದಿಲ್ಲ ಎಂದು ಹೇಳಿದ್ದಾರೆ.

*********

ಭಾರತ್ ಟ್ಯಾಕ್ಸಿ ಸಹಕಾರದ ಮೂಲಕ ಜನರನ್ನು ಒಗ್ಗೂಡಿಸುವ ವೇದಿಕೆಯಾಗಿದೆ ಮತ್ತು ಆ ಮೂಲಕ ಜನರು ಸಣ್ಣ ಸಣ್ಣ ಬಂಡವಾಳವನ್ನು ಶೇಖರಣೆ ಮಾಡಲು ಅವಕಾಶ ಮಾಡಿಕೊಡುತ್ತದೆ ಎಂದು ಕೇಂದ್ರ ಗೃಹ ಹಾಗೂ ಸಹಕಾರ ಸಚಿವ ಅಮಿತ್ ಶಾ ಹೇಳಿದ್ದಾರೆ. ಅವರು ತಮ್ಮ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಭಾರತ್ ಟ್ಯಾಕ್ಸಿ ಮೂಲಕ ಚಾಲಕರು ಹೆಚ್ಚಿನ ಲಾಭವನ್ನು ಗಳಿಸುವುದೇ ಅಲ್ಲದೇ ಅವರು ಘನತೆಯಿಂದ ಟ್ಯಾಕ್ಸಿಗಳ ಮಾಲೀಕರಾಗಬಹುದು ಎಂದು ತಿಳಿಸಿದ್ದಾರೆ. ಟ್ಯಾಕ್ಸಿ ಚಾಲಕರ ದೃಷ್ಟಿಯಿಂದ ಇಂದು ಅತ್ಯಂತ ಪ್ರಮುಖ ದಿನವಾಗಿದೆ. ಸಹಕಾರ ವಲಯದ ಮೊದಲ ಟ್ಯಾಕ್ಸಿ ಸೇವೆ ಭಾರತ್ ಟ್ಯಾಕ್ಸಿಗೆ ಇಂದು ಚಾಲನೆ ನೀಡಲಾಗುತ್ತಿದೆ ಎಂದು ಅಮಿತ್ ಶಾ ಹೇಳಿದ್ದಾರೆ.

*********

ಇದೇ ೧೯ರಿಂದ ೨೦ರವರೆಗೆ ದೆಹಲಿಯಲ್ಲಿ ನಡೆಯಲಿರುವ ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆಯ ಭಾಗವಾಗಿ ಕೃತಕಬುದ್ಧಿಮತ್ತೆಯ ಸವಾಲುಗಳನ್ನು ಎದುರಿಸುವಲ್ಲಿ ನಾಯಕತ್ವವನ್ನು ವಹಿಸಿಕೊಂಡಿರುವ ಭಾರತದ ಕ್ರಮವನ್ನು ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಆಂಟೋನಿಯೋ ಗುಟೆರಸ್ ಶ್ಲಾಘಿಸಿದ್ದಾರೆ. ತಾವು ಶೃಂಗಸಭೆಯಲ್ಲಿ ಭಾಗವಹಿಸಲು ಉತ್ಸುಕನಾಗಿದ್ದೇನೆ. ಸದ್ಯದ ಕಾಲಘಟ್ಟದಲ್ಲಿ ಅಂತಾರಾಷ್ಟ್ರೀಯ ಸಂಬಂಧಗಳಲ್ಲಿ ಕೃತಕಬುದ್ಧಿಮತ್ತೆ ಅತ್ಯಂತ ನಿರ್ಣಾಯಕ ವಿಚಾರವಾಗಿದೆ ಮತ್ತು ಅದು ಎಲ್ಲ ಕಾಲಕ್ಕೂ ಅತಿದೊಡ್ಡ ಸವಾಲಾಗಿದೆ ಎಂದು ಹೇಳಿದ್ದಾರೆ. ಕೃತಕಬುದ್ಧಿಮತ್ತೆ ಕುರಿತಂತೆ

ಶೃಂಗಸಭೆಯನ್ನು ಆಯೋಜಿಸುವ ಮೂಲಕ ಎಲ್ಲ ಸರ್ಕಾರಗಳು, ನಾಗರಿಕ ಸಮಾಜ ಹಾಗೂ ಖಾಸಗಿ ವಲಯವನ್ನು ಒಂದೆಡೆ ಸೇರಿಸುತ್ತಿರುವ ಭಾರತದ ಪ್ರಯತ್ನ ಮೆಚ್ಚುವಂತಹದು ಎಂದು ತಿಳಿಸಿದ್ದಾರೆ.

*********

ಕೊಲೊಂಬೊದ ಪವಿತ್ರ ಗಂಗಾರಾಮಯ ದೇವಾಲಯದಲ್ಲಿ ಪವಿತ್ರ ದೇವ್ನಿ ಮೊರಿ ಅವಶೇಷಗಳ ಪ್ರದರ್ಶನವನ್ನು ಉದ್ಘಾಟಿಸಿರುವುದಕ್ಕೆ ಪ್ರಧಾನಿ ನರೇಂದ್ರ ಮೋದಿ ಶ್ರೀಲಂಕಾ ಅಧ್ಯಕ್ಷ ಅನುರಾ ಕುಮಾರ ದಿಸ್ಸಾನಾಯಕೆ ಅವರಿಗೆ ಕೃತಜ್ಞತೆಗಳನ್ನು ಸಲ್ಲಿಸಿದ್ದಾರೆ. ಪ್ರಧಾನಿ ತಮ್ಮ ಸಾಮಾಜಿಕ ಪೋಸ್ಟ್‌ನಲ್ಲಿ ಭಗವಾನ್ ಬುದ್ಧರ ಸಾರ್ವಸಾಲಿಕ ಸಂದೇಶಗಳಾದ ದಯೆ, ಶಾಂತಿ ಮತ್ತು ಸೌಹಾರ್ದತೆ ಮನುಕುಲಕ್ಕೆ ದಾರಿದೀಪವಾಗಿದೆ ಎಂದು ಹೇಳಿದ್ದಾರೆ. ಕಳೆದ ವರ್ಷ ಏಪ್ರಿಲ್‌ನಲ್ಲಿ ಶ್ರೀಲಂಕಾಗೆ ಭೇಟಿ ನೀಡಿದ್ದಾಗ ಅಲ್ಲಿನ ಜನರು ಗೌರವ ಸಲ್ಲಿಸಲು ಈ ಅವಶೇಷಗಳನ್ನು ಶ್ರೀಲಂಕಾಗೆ ಕಳುಹಿಸಲು ನಿರ್ಧರಿಸಲಾಗಿತ್ತು ಎಂದು ಪ್ರಧಾನಿ ಹೇಳಿದ್ದಾರೆ. ಭಾರತ ಮತ್ತು ಶ್ರೀಲಂಕಾ ನಡುವೆ ಆಳವಾದ ನಾಗರಿಕ ಮತ್ತು ಆಧ್ಯಾತ್ಮಿಕ ಬಾಂಧವ್ಯ ಬೆಸೆದಿದೆ ಎಂದು ಪ್ರಧಾನಿ ತಿಳಿಸಿದ್ದಾರೆ.

*********

ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದಿನಿಂದ ಮೂರು ದಿನಗಳ ಜಮ್ಮು ಮತ್ತು ಕಾಶ್ಮೀರ ಪ್ರವಾಸ ಕೈಗೊಳ್ಳಲಿದ್ದು, ಅವರು ಸಮಗ್ರ ಭದ್ರತಾ ಸ್ಥಿತಿಗತಿಗಳನ್ನು ಅವಲೋಕಿಸಲಿದ್ದಾರೆ. ಅಲ್ಲದೇ ರಾಜ್ಯದಲ್ಲಿ ಕೈಗೊಂಡಿರುವ ಅಭಿವೃದ್ಧಿ ಯೋಜನೆಗಳನ್ನು ಪರಾಮರ್ಶಿಸಿ ಪ್ರಮುಖ ರಾಜಕೀಯ ನಾಯಕರೊಂದಿಗೆ ಸಂವಾದ ನಡೆಸಲಿದ್ದಾರೆ. ಇಂದು ಸಂಜೆ ಜಮ್ಮುವಿನ ಲೋಕಭವನವನ್ನು ತಲುಪಲಿರುವ ಅವರು, ಪ್ರಮುಖ ರಾಜಕೀಯ ನಾಯಕರೊಂದಿಗೆ ಸಭೆ ನಡೆಸಲಿದ್ದಾರೆ. ಭದ್ರತಾ ಸಂಸ್ಥೆಗಳೊಂದಿಗೆ ಒಟ್ಟಾರೆ ಕಾನೂನು ಸುವ್ಯವಸ್ಥೆ ಮತ್ತು ಭದ್ರತಾ ಸ್ಥಿತಿಗತಿಗಳನ್ನು ಅವಲೋಕಿಸಲಿರುವ ಅವರು, ಆಡಳಿತ ಹಾಗೂ ಮೂಲಸೌಕರ್ಯ ಉಪಕ್ರಮಗಳನ್ನು ಪರಿಶೀಲಿಸಲಿದ್ದಾರೆ. ನಾಳೆ ಅಮಿತ್ ಶಾ ಭದ್ರತಾ ಸ್ಥಿತಿಗತಿ ಕುರಿತು ಪ್ರಮುಖ ರಾಜಕೀಯ ನಾಯಕರೊಂದಿಗೆ ಸಭೆ ನಡೆಸುವರು. ಜೊತೆಗೆ ಕತುವಾ ಜಿಲ್ಲೆಯ ಅಂತಾರಾಷ್ಟ್ರೀಯ ಗಡಿಗೆ ಭೇಟಿ ನೀಡುವರು. ಫೆಬ್ರವರಿ ೭ರಂದು ಅಮಿತ್ ಶಾ ಶ್ರೀನಗರ ತಲುಪಲಿದ್ದು, ಅಲ್ಲಿ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ನೀಡಲಿದ್ದಾರೆ.

*********

ಗವರ್ನರ್ ಸಂಜಯ್ ಮಲ್ಹೋತ್ರಾ ನೇತೃತ್ವದ ಭಾರತೀಯ ರಿಸರ್ವ್ ಬ್ಯಾಂಕಿನ ಆರು ಸದಸ್ಯರ ಹಣಕಾಸು ನೀತಿ ಸಮಿತಿಯು ನಿನ್ನೆಯಿಂದ ತನ್ನ ದ್ವೈಮಾಸಿಕ ಸಭೆಯನ್ನು ಆರಂಭಿಸಿದ್ದು, ಬಡ್ಡಿ ದರಗಳ ನಿಗದಿ ಕುರಿತು ಚರ್ಚೆ ನಡೆಸುತ್ತಿದೆ. ಅದು ತನ್ನ ನಿರ್ಧಾರವನ್ನು ನಾಳೆ ಬೆಳಿಗ್ಗೆ ಪ್ರಕಟಿಸಲಿದೆ.

*********

ನಾಗರಿಕ ಸೇವಾ ಪರೀಕ್ಷೆಗಳು ೨೦೨೬ ಕುರಿತಂತೆ ನಿನ್ನೆ ಅಧಿಸೂಚನೆ ಹೊರಡಿಸಿರುವ ಕೇಂದ್ರ ನಾಗರಿಕ ಸೇವಾ ಆಯೋಗ - ಯುಪಿಎಸ್‌ಸಿ ಈಗಾಗಲೇ ನಾಗರಿಕ ಸೇವೆಯಲ್ಲಿರುವ ಅಭ್ಯರ್ಥಿಗಳ ಅರ್ಹತೆ ಹಾಗೂ ಎಷ್ಟು ಬಾರಿ ಪರೀಕ್ಷೆಗಳನ್ನು ತೆಗೆದುಕೊಳ್ಳಬಹುದು ಎಂಬ ಕುರಿತು ಸ್ಪಷ್ಟ ನಿಯಮಗಳನ್ನು ಪ್ರಕಟಿಸಿದೆ.

*********

ಔಷಧೀಯ ಗಿಡಮೂಲಿಕೆಗಳನ್ನು ಬೆಳೆಸುವುದು ಮತ್ತು ಅವುಗಳ ಪ್ರಯೋಜನ ಹಂಚಿಕೆ ವಿನಾಯತಿಗಳನ್ನು ಬಯಸುವ ಪಾಲುದಾರರಿಗೆ ಮೂಲ ಪ್ರಮಾಣ ಪತ್ರಗಳನ್ನು ವಿದ್ಯುನ್ಮಾನ ವಿಧಾನದ ಮೂಲಕ ವಿತರಿಸುವ ಪ್ರಕ್ರಿಯೆಯನ್ನು ಸುಲಭಗೊಳಿಸಲು ಸರ್ಕಾರ ಡಿಜಿಟಲ್ ಪೋರ್ಟಲ್‌ಅನ್ನು ಆರಂಭಿಸಿದೆ. ಈ ಪೋರ್ಟಲ್ ಏಕ ಗವಾಕ್ಷಿ ಯೋಜನೆಯಂತೆ ಕಾರ್ಯ ನಿರ್ವಹಿಸಲಿದ್ದು, ಮೊದಲಿನಿಂದ ಕೊನೆಯವರೆಗೆ ಎಲ್ಲ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಿ ಪ್ರಮಾಣಪತ್ರಗಳನ್ನು ವಿತರಿಸಲಿದೆ.

*********

ಮಹಿಳೆಯರ ಪ್ರೀಮಿಯರ್ ಲೀಗ್ ಕ್ರಿಕೆಟ್ ಪಂದ್ಯಾವಳಿಯ ಫೈನಲ್‌ನಲ್ಲಿಂದು ಡೆಲ್ಲಿ ಕ್ಯಾಪಿಟಲ್ಸ್ ಮತ್ತು ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡಗಳು ಮುಖಾಮುಖಿಯಾಗಲಿವೆ. ವಡೋದರದ ಬಿಸಿಎ ಕ್ರೀಡಾಂಗಣದಲ್ಲಿ ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ. ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ೨ನೇ ಬಾರಿ ಫೈನಲ್‌ಗೇರಿದ್ದು, ಡಬ್ಲ್ಯೂಪಿಎಲ್ ಪ್ರಶಸ್ತಿ ಗೆಲ್ಲುವ ಸಾಧ್ಯತೆಗಳಿವೆ. ಅದೇ ರೀತಿ ೪ನೇ ಬಾರಿ ಫೈನಲ್‌ಗೇರಿರುವ ಡೆಲ್ಲಿ ಕ್ಯಾಪಿಟಲ್ಸ್ ಕೂಡ ಪ್ರಶಸ್ತಿ ಗೆಲ್ಲುವ ಮೆಚ್ಚಿನ ತಂಡಗಳಲ್ಲಿ ಒಂದಾಗಿದೆ.ಈ ವರ್ಷದ ಮಹಿಳೆಯರ ಪ್ರೀಮಿಯರ್ ಲೀಗ್ ಕ್ರಿಕೆಟ್ ಪಂದ್ಯಾವಳಿಯಲ್ಲಿ ಒಟ್ಟಾರೆ ೧೦ ಕೋಟಿ ರೂಪಾಯಿಗಳಷ್ಟು ಬಹುಮಾನ ಒಳಗೊಂಡಿದೆ ಎಂದು ಬಿಸಿಸಿಐ ಪ್ರಕಟಿಸಿದೆ.

*****END****